**CC 10/2018**
**PW.8**

# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ದೊಡ್ಡಬಳ್ಳಾಪುರ

**ಸಿ ಸಿ ನಂ : 10/2018**

**ಪಿ ಡಬ್ಲ್ಯೂ - 08**

**ಸಿ ಡಬ್ಲ್ಯೂ-13**

**ದಿಃ 20.01.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಹೆಸರು ಃ ರಾಘವೇಂದ್ರ ಇಂಬ್ರಾಪುರ**
**ತಂದೆಯ ಹೆಸರು ಃ ಜಗನ್ನಾಥ ಇಂಬ್ರಾಪುರ**
**ವಯಸ್ಸು ಃ 43 ವರ್ಷ**
**ಉದ್ಯೋಗ ಃ ಪಿ.ಐ ವಿಕಾಸ ಸೌಧ**
**ವಿಳಾಸ ಃ ಬೆಂಗಳೂರು.**
**ಮುಖ್ಯ ವಿಚಾರಣೆ ಃ ಸ ಸ ಅ ರವರಿಂದ**

ನಾನು ಜೂನ್ 2016 ರಿಂದ ಜನವರಿ 2018 ರವರೆಗೂ ನಾನು ದೊಡ್ಡಬೆಳವಂಗಲ ಪೊಲೀಸ್ ಠಾಣೆಯಲ್ಲಿ ಪಿ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ

ದಿಃ05.03.2017 ರಂದು ಬೆಳಿಗ್ಗೆ 10-00 ಗಂಟೆ ಸಮಯದಲ್ಲಿ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 37/2017 ರಂತೆ ಪ್ರಕರಣ ದಾಖಲಿಸಿ ಪ್ರ.ವ.ವ ಯನ್ನು ಮಾನ್ಯ ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟೆನು ಹಾಗೂ ಪ್ರತಿಯನ್ನು ನನ್ನ ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟೆನು. ಪ್ರ.ವ.ವರದಿಯನ್ನು ನಿಪಿ-9 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ಅದೇ ದಿನ ಘಟನಾ ಸ್ಥಳಕ್ಕೆ ಭೇಟಿ ಕೊಟ್ಟು ಚಾಸಾ-1 ರವರು ತೋರಿಸಿದ ಘಟನಾ ಸ್ಥಳದ ಪಂಚನಾಮೆಯನ್ನು ಚಾಸಾ-7 ಮತ್ತು 8 ರವರ ಸಮಕ್ಷಮ ಬೆಳಿಗ್ಗೆ 11-00 ರಿಂದ 11-30 ಗಂಟೆಯವರೆಗೂ ಮಾಡಿರುತ್ತೇನೆ. ಸಾಕ್ಷಿಯು ನಿಪಿ-2 ಪಂಚನಾಮೆಯಲ್ಲಿನ ತಮ್ಮ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸಾಕ್ಷಿಯ ಸಹಿಯನ್ನು ನಿಪಿ-2(ಡಿ) ಎಂದು ಗುರುತಿಸಲಾಯಿತು. ಅದೇ ಸಮಯದಲ್ಲಿ 2 ಹಿಡಿಗಾತ್ರದ ಕಲ್ಲು, ಒಂದ ಏಷಿಯಾ ಎಲ್.ಪಿ.ಜಿ. ಕಂಪೆನಿಯ ಖಾಲಿ ಸಿಲಿಂಡರ್ ಹಾಗೂ ಒಂದು ½ ತುಂಬಿದ ಹಾಗೂ 3 ತುಂಬಿದ ಭಾರತ್ ಗ್ಯಾಸ್ ಸಿಲಿಂಡರ್ ಗಳನ್ನು ಹಾಗೂ ಒಂದು ಖಾಲಿ ವಾಣಿಜ್ಯ ಸಿಲಿಂಡರ್ ಗಳನ್ನು ಪಂಚರ ಸಮಕ್ಷಮ ಅಮಾನತ್ತುಪಡಿಸಿಕೊಂಡಿರುತ್ತೇನೆ. ಸಾಕ್ಷಿಯು ನಿಪಿ-3 ರಿಂದ 8

ಫೋಟೋದಲ್ಲಿನ ಸಿಲಿಂಡರ್ ಗಳನ್ನು ನೋಡಿ ಗುರುತಿಸಿರುತ್ತಾರೆ. ಅಮಾನತ್ತುಪಡಿಸಿಕೊಂಡ ಸಿಲಿಂಡರ್ ಗಳನ್ನು ಠಾಣಾ ಮಾಲು ಪಟ್ಟಿ ಸಂಖ್ಯೆ 37/2017 ರಡಿ ನ್ಯಾಯಾಲಯಕ್ಕೆ ಭರಾಯಿಸಿಕೊಂಡಿರುತ್ತೇನೆ. ದಿಃ 31.03.2017 ರಂದು ಆರೋಪಿಯು ನಿರೀಕ್ಷಣಾ ಜಾಮೀನು ಪಡೆದು ಠಾಣೆಗೆ ಹಾಜರಾಗಿದ್ದು, ದಸ್ತಗಿರಿ ಕ್ರಮ ಜರುಗಿಸಿ ಸೂಕ್ತ ಜಾಮೀನಿನ ಮೇರೆಗೆ ಬಿಡುಗಡೆ ಮಾಡಿರುತ್ತೇನೆ. ದಿಃ 23.06.2017 ರಂದು ದೊಡ್ಡಬಳ್ಳಾಪುರ ಅಗ್ನಿಶಾಮಕ ಪೋಲೀಸ್ ಠಾಣೆ ಹಾಗೂ ಭಾರತ್ ಗ್ಯಾಸ್ ಏಜೆನ್ಸಿಯವರಿಗೆ ವರದಿ ನೀಡಲು ಪತ್ರ ಮುಖೇನ ವ್ಯವಹರಿಸಿರುತ್ತೇನೆ. ದಿಃ 26.07.2017 ರಂದು ಚಾಸಾ-2 ರಿಂದ 6 ರವರ ಹೇಳಿಕೆಗಳನ್ನು ದಾಖಲಿಸಿಕೊಂಡೆನು. ನಂತರ ಅದೇ ದಿನ ದೊಡ್ಡಬಳ್ಳಾಪುರ ಅಗ್ನಿಶಾಮಕ ಪೋಲೀಸ್ ಠಾಣೆ ಹಾಗೂ ಭಾರತ್ ಗ್ಯಾಸ್ ಏಜೆನ್ಸಿರವರಿಂದ ಘಟನೆಗೆ ಸಂಬಂಧಿಸಿದ ವರದಿಗಳನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ದಾಖಲೆಗಳನ್ನು ಕ್ರಮವಾಗಿ ನಿಪಿ-10 ಮತ್ತು 11 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-10(ಎ) ಮತ್ತು 11(ಎ) ಎಂದು ಗುರುತಿಸಲಾಯಿತು. ನಂತರ ಅದೇ ದಿನ ಕೃತ್ಯದಲ್ಲಿ ಹಾನಿಯಾದ ಮನೆಯ ಮಾಲೀಕರಾದ ಆರೋಪಿ, ಚಾಸಾ-1 ಹಾಗೂ ಚಾಸಾ-2 ರವರ ಮನೆಗೆ ಸಂಬಂಧಿಸಿದ ಡಿಮ್ಯಾಂಡ್ ರಿಜಿಸ್ಟರ್ ನ್ನು ನೀಡುವಂತೆ ಚಾಸಾ-11 ರವರಿಗೆ ಮನವಿಯನ್ನು ಸಲ್ಲಿಸಿರುತ್ತೇನೆ. ಚಾಸಾ-11 ರವರು ಸಲ್ಲಿಸಿದ ದಾಖಲೆಗಳನ್ನು ದಿಃ 07.07.2017 ರಂದು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ದಾಖಲೆಗಳನ್ನು ಕ್ರಮವಾಗಿ ನಿಪಿ-12 ರಿಂದ 14 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-12(ಎ), 13(ಎ) ಮತ್ತು 14(ಎ) ಎಂದು ಗುರುತಿಸಲಾಯಿತು. ನಂತರ ತನಿಖೆಯು ಪೂರ್ಣಗೊಂಡಿದ್ದು, ಆರೋಪಿತನ ವಿರುದ್ಧ ಸಾಕ್ಷ್ಯಾಧಾರಗಳು ಕಂಡ ಬಂದ ಕಾರಣ ದೋಷಾರೋಪಣೆ ಪಟ್ಟಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿತಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಜಿ.ಜಿ., ವಕೀಲರಿಂದಃ**

ನಾನು ಪಿರ್ಯಾದನ್ನು ಪಡೆದುಕೊಂಡು ಸುಳ್ಳು ಪ್ರಕರಣವನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಸಾಮಾನ್ಯವಾಗಿ ಅನಿಲ ಸ್ಫೋಟಗೊಂಡಾಗ ಮನೆಗಳು ಕಪ್ಪಾಗುತ್ತವೆ ಎಂದರೆ ಸರಿ. ಈ ಪ್ರಕರಣದಲ್ಲಿನ ಮನೆಯಲ್ಲಿ ಕಪ್ಪು ಮಸಿ ಆಗಿರಲಿಲ್ಲ ಆದರೆ ಸಂಪೂರ್ಣವಾಗಿ ಮನೆ ಧ್ವಂಸವಾಗಿತ್ತು ಎಂದು ನುಡಿಯುತ್ತಾರೆ. ಸಾಮಾನ್ಯವಾಗಿ ಅನಿಲ ಸ್ಫೋಟಗೊಂಡಾಗ ಬೆಂಕಿ ಆಹುತಿಗೆ ಮನೆ ಹಾಗೂ ಮನೆಯಲ್ಲಿನ ಸಾಮಾನುಗಳು ಸುಟ್ಟು ಕರಕಲಾಗುತ್ತದೆ ಎಂದರೆ

ಸರಿ. ಮನೆಯು ಅನಿಲ ಸ್ಫೋಟದಿಂದ ಧ್ವಂಸವಾಗಿರಲಿಲ್ಲ ಮನೆಯು ಹಳೆಯ ಮನೆಯಾಗಿದ್ದರಿಂದ ಕುಸಿದುಬಿದ್ದಿರುತ್ತದೆ ಎಂದರೆ ಸರಿಯಲ್ಲ. ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದೇ ಇದ್ದರೂ ಠಾಣಾ ಅಂಕಿ ಸಂಖ್ಯೆಗಾಗಿ ಸುಳ್ಳು ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಕುಸಿದು ಹೋಗಿದೆ ಎಂದು ಹೇಳಲಾದ ಮನೆ ಎಷ್ಟು ಕಾಲದ ಹಳೆಯ ಮನೆ ಎಂದು ವಿಚಾರಣೆ ಮಾಡಿಲ್ಲ ಕಾರಣ ಅದರ ಅವಶ್ಯಕತೆ ಈ ಪ್ರಕರಣದಲ್ಲಿರಲಿಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿಲ್ಲ ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-10 ಮತ್ತು 11 ದಾಖಲೆಯನ್ನು ಈ ಪ್ರಕರಣಕ್ಕಾಗಿ ಸೃಷ್ಟಿಸಿಕೊಳ್ಳಲಾಗಿದೆ ಎಂದರೆ ಸರಿಯಲ್ಲ. ಈ ಪ್ರಕರಣದಲ್ಲಿ ಗ್ಯಾಸ್‌ನ್ನು ರೀಫಿಲ್ಲಿಂಗ್ ಮಾಡುತ್ತಿದ್ದ ಉಪಕರಣಗಳನ್ನು ಅಮಾನತ್ತುಪಡಿಸಿಕೊಡಿಂಲ್ಲ ಎಂದರೆ ಸಾಕ್ಷಿಯು ಸದರಿ ಉಪಕರಣಗಳು ಕುಸಿದು ಮನೆಯಡಿ ಸಿಲುಕಿಕೊಂಡು ದೊರೆತಿರುವುದಿಲ್ಲ ಎಂದು ನುಡಿಯುತ್ತಾರೆ. ಸದರಿ ವಿಚಾರವನ್ನು ನಾನು ಎಲ್ಲಿಯೂ ತಿಳಿಸಿಲ್ಲ ಎಂದರೆ ಸರಿ. ಆರೋಪಿಗೂ ಈ ಪ್ರಕರಣದಲ್ಲಿನ ಕೃತ್ಯಕ್ಕೂ ಯಾವುದೇ ಸಂಬಂಧ ಇಲ್ಲದೇ ಇದ್ದರೂ ಆರೋಪಿತನ ವಿರುದ್ಧ ಸುಳ್ಳು ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನ ರೀತ್ಯಾ ಬೆರಳಚ್ಚುಗಾರರಿಂದ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲಾಯಿತು)**

**ಓ ಹೇ ಕೇ ಸ ಅದೆ**

**ಅಪರ ಸಿವಿಲ್ ನ್ಯಾ. ಮತ್ತು**
**ಜೆ.ಎಂ.ಎಫ್.ಸಿ, ದೊಡ್ಡಬಳ್ಳಾಪುರ**